ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	573
ಸದಸ್ಯರ ಹೆಸರು	:	ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ
ಉತ್ತರಿಸುವ ದಿನಾಂಕ	:	24-09-2020
ಉತ್ತರಿಸುವ ಸಚಿವರು	:	ಗೃಹ ಸಚಿವರು

ಕ್ರ.ಸಂ.	ವಿಷಯ	ಉತ್ತರ
ಅ)	ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರಾಮನಗರ ಮರಳು ಅಡ್ಡೆ ಮೇಲೆ ಅನಾವಶ್ಯಕ ಜೋಯಿಡಾ ಪೊಲೀಸ್ ಅಧಿಕಾರಿ ದಾಳಿ ನಡೆಸಿ ಲಕ್ಷಾಂತರ ಹಣ ಪಡೆದು ಪ್ರಕರಣ ದಾಖಲಿಸದೆ ವಾಹನ ಬಿಡುತ್ತಿರುವುದು ಗೋವಾ ಗಡಿ ಭಾಗದಲ್ಲಿರುವ ಅನಮೋಡ ತಪಾಸಣೆ ನಾಕೆಯಲ್ಲಿಯೂ ಕೂಡ ಮದ್ಯವನ್ನು ಸಾಗಿಸುವಾಗ ಪ್ರಕರಣ ದಾಖಲಿಸುವ ಬದಲಾಗಿ ಅವರಿಂದ ಲಕ್ಷಾಂತರ ರೂಪಾಯಿ ಹಣ ಪಡೆದ ಸಣ್ಣ ಪ್ರಕರಣವನ್ನು ಬೇರೆಯವರ ಮೇಲೆ ದಾಖಲಿಸಿ ಕೈತೊಳೆದುಕೊಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)	ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಪೊಲೀಸ್ ಠಾಣೆಗಳಲ್ಲಿ ಅಕ್ರಮ ಮರಳುಗಾರಿಕೆಗೆ ಸಂಬಂಧಿಸಿದಂತೆ 07 ಪ್ರಕರಣಗಳು ಹಾಗೂ ಅಕ್ರಮ ಮದ್ಯ ಸಾಗಾಟಕ್ಕೆ ಸಂಬಂದಿಸಿದಂತೆ 03 ಪ್ರಕರಣಗಳನ್ನು ದಾಖಲಿಸಿ ಕಾನೂನಿನಂತೆ ಕ್ರಮ ಕೈಗೊಳ್ಳಲಾಗಿದೆ. ಅನಮೋಡ ತಪಾಸಣೆ ನಾಕಾದಲ್ಲಿ ಆರ್‌ಟಿಓ ಮತ್ತು ಪೊಲೀಸ್ ಇಲಾಖೆಯಿಂದ ಜಂಟಿಯಾಗಿ ತಪಾಸಣೆ ನಡೆಸಲಾಗುತ್ತಿದೆ. ಅಬಕಾರಿ ಇಲಾಖೆಯಿಂದ ಸಹ ಅನಮೋಡ ನಾಕಾದಲ್ಲಿ ಅಕ್ರಮ ಮದ್ಯ ಸಾಗಾಟದ ಬಗ್ಗೆ ನಿಗಾವಹಿಸಿ ಕಾನೂನು ಉಲ್ಲಂಘಿಸಿದವರ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದೆ. ಪೊಲೀಸ್ ಇಲಾಖೆಯ ಮೇಲಾಧಿಕಾರಿಗಳು ಆಗಾಗ್ಗೆ ಭೇಟಿ ನೀಡಿ ಅನಮೋಡ ನಾಕಾದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.
ಆ)	ಈ ರೀತಿ ಬೇಜವಾಬ್ದಾರಿತನದಿಂದ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸಾರ್ವಜನಿಕರು ಲಿಖಿತ ದೂರು ನೀಡಿದರೂ ಮೇಲಾಧಿಕಾರಿಗಳು ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ತನಿಖೆ ಮಾಡದೆ ಉತ್ತರ ನೀಡುವುದು ಸಂಶಯಕ್ಕೆ ಆಸ್ಪದವಾಗಿದ್ದು, ಈ ಬಗ್ಗೆ ತನಿಖೆ ಮಾಡಲಾಗಿದೆಯೇ; (ವಿವರ ನೀಡುವುದು)	ಜೊಯಿಡಾ ತಾಲ್ಲೂಕಿನ ಪೊಲೀಸ್ ಅಧಿಕಾರಿಗಳ ಮೇಲೆ ಸಾರ್ವಜನಿಕರಿಂದ ಯಾವುದೇ ರೀತಿಯ ಲಿಖಿತ ದೂರು ಬಂದಿರುವುದಿಲ್ಲ. ಆದರೆ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ಎಲ್.ಘೋಟ್ನೇಕರ (ಸ್ಥಳೀಯ ಸಂಸ್ಥೆ) ಹಳಿಯಾಳರವರು ಪೊಲೀಸ್ ಮಹಾನಿರೀಕ್ಷಕರು, ಪಶ್ಚಿಮ ವಲಯ ಮಂಗಳೂರು ರವರಲ್ಲಿ ಈ ಬಗ್ಗೆ ಅರ್ಜಿ ನೀಡಿದ್ದು, ಸದರಿ ಅರ್ಜಿಯನ್ನು ಪೊಲೀಸ್ ಉಪಾಧೀಕ್ಷಕರು, ಕಾರವಾರ ಉಪ ವಿಭಾಗರವರು ನಿಷ್ಪಕ್ಷವಾಗಿ ಪರಿಶೀಲನೆ ಮಾಡಿ, ಸದರಿ ಅರ್ಜಿಯಲ್ಲಿ ಯಾವುದೇ ಸತ್ಯಾಂಶ ಕಂಡು ಬಂದಿರುವುದಿಲ್ಲ ಎಂದು ಐಜಿಪಿ, ಪಶ್ಚಿಮ ವಲಯ, ಮಂಗಳೂರು ರವರಿಗೆ ವರದಿಯನ್ನು ಸಲ್ಲಿಸಿರುತ್ತಾರೆ.

......2

ಇ)	ಸದರಿ ವಿಷಯದಲ್ಲಿ ಸಾರ್ವಜನಿಕರು / ಜನ ಪ್ರತಿನಿಧಿಗಳು ಸಂಬಂಧಿಸಿದ ಇಲಾಖಾ ಮೇಲಾಧಿಕಾರಿಗಳಿಗೆ ಲಿಖಿತ ಪತ್ರದ ಮುಖಾಂತರ ತನಿಖೆ ಮಾಡಲು ವಿನಂತಿಸಿ ಪತ್ರ ನೀಡಿದರೂ ಇಲ್ಲಿಯವರೆಗೂ ಯಾವುದೇ ರೀತಿಯಲ್ಲಿ ಸ್ಪಂದಿಸದಿರುವ ಅಧಿಕಾರಿಯ ಕಾರ್ಯ ವೈಖರಿಯ ಬಗ್ಗೆ ಸರ್ಕಾರ ವರದಿ ಪಡೆದು ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು)	ಈ ಕುರಿತು ಸಾರ್ವಜನಿಕರಿಂದ ಯಾವುದೇ ಲಿಖಿತ ದೂರುಗಳು ಬಂದಿರುವುದಿಲ್ಲ. ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ಎಲ್.ಘೋಟ್ನೇಕರ (ಸ್ಥಳೀಯ ಸಂಸ್ಥೆ) ಹಳಿಯಾಳ ರವರು ಪೊಲೀಸ್ ಮಹಾನಿರೀಕ್ಷಕರು, ಪಶ್ಚಿಮ ವಲಯ ಮಂಗಳೂರು ರವರಲ್ಲಿ ಅರ್ಜಿ ನೀಡಿದ್ದು, ಸದರಿ ಅರ್ಜಿಯನ್ನು ಪೊಲೀಸ್ ಉಪಾಧೀಕ್ಷಕರು, ಕಾರವಾರ ಉಪ ವಿಭಾಗರವರು ನಿಷ್ಪಕ್ಷವಾಗಿ ಪರಿಶೀಲನೆ ಮಾಡಿ, ಸದರಿ ಅರ್ಜಿಯಲ್ಲಿ ಯಾವುದೇ ಸತ್ಯಾಂಶ ಕಂಡು ಬಂದಿರುವುದಿಲ್ಲ ಎಂದು ಐಜಿಪಿ, ಪಶ್ಚಿಮ ವಲಯ, ಮಂಗಳೂರು ರವರಿಗೆ ವರದಿಯನ್ನು ಸಲ್ಲಿಸಲಾಗಿರುತ್ತದೆ. ಜೊಯಿಡಾ ತಾಲ್ಲೂಕಿನ ಎಲ್ಲಾ ಪೊಲೀಸ್ ಅಧಿಕಾರಿಗಳಿಗೆ ಕಾನೂನಿನ ಚೌಕಟ್ಟಿನಲ್ಲಿ ಕರ್ತವ್ಯ ನಿರ್ವಹಿಸಲು ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆಸುವ ಸಾಪ್ತಾಹಿಕ ಹಾಗೂ ಮಾಸಿಕ ಅಪರಾಧ ಸಭೆಗಳಲ್ಲಿ ಪದೇ ಪದೇ ಸೂಚಿಸಲಾಗಿರುತ್ತದೆ. ಸಾರ್ವಜನಿಕ / ಜನಪ್ರತಿನಿಧಿಗಳಿಂದ ದೂರುಗಳು ಬಂದಲ್ಲಿ ಅದಕ್ಕೆ ಕೂಡಲೇ ಸ್ಪಂದಿಸಿ ನಿಷ್ಪಕ್ಷವಾಗಿ ತನಿಖೆ ಕೈಗೊಳ್ಳಲು ಸೂಚಿಸಲಾಗಿದೆ. ಹಾಗೂ ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಪೊಲೀಸ್ ಅಧಿಕಾರಿ / ಸಿಬ್ಬಂದಿಗಳು ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಅವರ ವಿರುದ್ಧ ಇಲಾಖಾ ಶಿಸ್ತುಕ್ರಮ ಜರುಗಿಸಲು ಕ್ರಮವಹಿಸಲಾಗುವುದು.

ಹೆಚ್‌ಡಿ 282 ಎಸ್‌ಎಸ್‌ಟಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು